# All India Radio: Bangalore
# National Bulletin In Kannada
# 17.02.2025  07.35 a.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ೮ನೇ ಹಿಂದೂಮಹಾಸಾಗರ ಸಮ್ಮೇಳನ ; ವಿವಿಧ ರಾಷ್ಟ್ರಗಳ ವಿದೇಶಾಂಗ ಸಚಿವರೊಂದಿಗೆ ಡಾ. ಎಸ್. ಜೈಶಂಕರ್ ದ್ವಿಪಕ್ಷೀಯ ಸಭೆ
2. ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಪಂಜಾಬ್ ಪ್ರವಾಸ ; ಚಂಡೀಗಡ ಹಾಗೂ ಮೊಹಾಲಿಯಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿ
3. ಆರನೇ ಆವೃತ್ತಿಯ ಭಾರತ-ಜಪಾನ್ ಜಂಟಿ ಮಿಲಿಟರಿ ಸಮರಾಭ್ಯಾಸ ; ಇದೇ ೨೫ ರಿಂದ ಮೌಂಟ್ ಫುಜಿಯಲ್ಲಿ ಆರಂಭ
4. ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿ ;  ಮಾರ್ಚ್ ೨೨ ರಿಂದ ಆರಂಭ ; ಉದ್ಘಾಟನಾ ಪಂದ್ಯದಲ್ಲಿ ಆರ್‌ಸಿಬಿ-ಕೆಕೆಆರ್ ಮುಖಾಮುಖಿ

<><><><>

ಓಮನ್ ರಾಜಧಾನಿ ಮಸ್ಕಟ್‌ನಲ್ಲಿ ನಡೆಯುತ್ತಿರುವ ೮ನೇ ಹಿಂದೂ ಮಹಾಸಾಗರ ಸಮ್ಮೇಳನದ ನೇಪಥ್ಯದಲ್ಲಿ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ನಿನ್ನೆ ಮಾರಿಷಸ್, ಮಾಲ್ಡೀವ್ಸ್, ನೇಪಾಳ, ಭೂತಾನ್ ಮತ್ತು ಶ್ರೀಲಂಕಾದ ತಮ್ಮ ಸಹವರ್ತಿಗಳೊಂದಿಗೆ ಸಭೆ ನಡೆಸಿದರು. ಪ್ರತ್ಯೇಕ ಸಭೆಗಳಲ್ಲಿ ವಿದೇಶಾಂಗ ಸಚಿವರು, ಈ ರಾಷ್ಟ್ರಗಳೊಂದಿಗೆ ಭಾರತ ಹೊಂದಿರುವ ದ್ವಿಪಕ್ಷೀಯ ಸಂಬಂಧ ಹಾಗೂ ವಿವಿಧ ಕ್ಷೇತ್ರಗಳಲ್ಲಿ ರಾಷ್ಟ್ರಗಳ ನಡುವಿನ ಸಹಕಾರದ ಬಲವರ್ಧನೆಯ ಅಗತ್ಯತೆ ಕುರಿತು ಪ್ರತಿಪಾದಿಸಿದರು. ಡಾ. ಜೈಶಂಕರ್ ಸಮ್ಮೇಳನದ ಸಂದರ್ಭದಲ್ಲಿ, ಓಮನ್, ಬ್ರೂನಿ ಮತ್ತು ಇರಾನ್‌ನ ತಮ್ಮ ಸಹವರ್ತಿಗಳೊಂದಿಗೂ ಸಭೆ ನಡೆಸಿದರು. ಬಾಂಗ್ಲಾದೇಶದ ವಿದೇಶಾಂಗ ವ್ಯವಹಾರಗಳ ಸಲಹೆಗಾರ ಮೊಹಮ್ಮದ್ ತೌಹಿದ್ ಹೊಸ್ಸೈನ್ ಅವರೊಂದಿಗೂ ಡಾ.ಜೈಶಂಕರ್ ದ್ವಿಪಕ್ಷೀಯ ಮಾತುಕತೆ ನಡೆಸಿದರು. ೮ ನೇ ಹಿಂದೂ ಮಹಾಸಾಗರ ಸಮ್ಮೇಳನವನ್ನು ಇಂಡಿಯಾ ಫೌಂಡೇಶನ್, ಓಮನ್‌ನ ವಿದೇಶಾಂಗ ಸಚಿವಾಲಯದ ಸಹಯೋಗದೊಂದಿಗೆ ನಿನ್ನೆ ಮತ್ತು ಇಂದು

ಮಸ್ಕಟ್‌ನಲ್ಲಿ ಆಯೋಜಿಸಿದೆ. ಲನೇ ಹಿಂದೂ ಮಹಾಸಾಗರ ಸಮ್ಮೇಳನದಲ್ಲಿ ಭಾಗವಹಿಸಿ ಮಾತನಾಡಿದ ಡಾ. ಎಸ್. ಜೈಶಂಕರ್, ಹಿಂದೂ ಮಹಾಸಾಗರ, ಪಶ್ಚಿಮ ಏಷ್ಯಾ ಮತ್ತು ಇಂಡೋ ಫೆಸಿಫಿಕ್ ಪ್ರದೇಶಗಳಲ್ಲಿ ಒಪ್ಪಂದಗಳಿಗೆ ಬದ್ಧರಾಗಿರುವುದು ಮತ್ತು ಅಂತಾರಾಷ್ಟ್ರೀಯ ಕಾನೂನನ್ನು ಪಾಲಿಸುವುದು ಆ ಪ್ರದೇಶಗಳಲ್ಲಿ ಸ್ಥಿರತೆ ಕಾಪಾಡಲು ಪ್ರಮುಖ ಪಾತ್ರವಹಿಸುತ್ತದೆ ಎಂದರು.

ಧ್ವನಿ : ಡಾ. ಎಸ್. ಜೈಶಂಕರ್ (೨೩ ಸೆಕೆಂಡ್ಸ್)

<><><><>

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಇಂದು ಪಂಜಾಬ್‌ನ ಚಂಡೀಗಢ ಮತ್ತು ಮೊಹಾಲಿಗೆ ಒಂದು ದಿನದ ಪ್ರವಾಸ ಕೈಗೊಳ್ಳಲಿದ್ದಾರೆ. ಭೇಟಿಯ ಸಮಯದಲ್ಲಿ ಅವರು, ಮೊಹಾಲಿಯ ರಾಷ್ಟ್ರೀಯ ಕೃಷಿ-ಆಹಾರ ಮತ್ತು ಜೈವಿಕ ಉತ್ಪಾದನಾ ಸಂಸ್ಥೆ - ಎನ್‌ಎಬಿಐನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಹಾಗೆಯೇ, ಭಾರತೀಯ ವಿಜ್ಞಾನ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆಗಳ ಬೋಧಕ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳೊಂದಿಗಿನ ಸಂವಾದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

<><><><>

ಅಂತಾರಾಷ್ಟ್ರೀಯ ಯೋಗ ದಿನದ ೨೦೨೫ ರ ಆವೃತ್ತಿಗೆ ಪ್ರತಿಷ್ಠಿತ ಪ್ರಧಾನಮಂತ್ರಿ ಯೋಗ ಪ್ರಶಸ್ತಿಗಳಿಗೆ ನಾಮನಿರ್ದೇಶನಗಳನ್ನು ಸಲ್ಲಿಸಲು ಆಯುಷ್ ಸಚಿವಾಲಯ ಅವಕಾಶ ಕಲ್ಪಿಸಿದೆ. ಈ ಪ್ರಶಸ್ತಿಗಳು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಯೋಗದ ಪ್ರಚಾರ ಮತ್ತು ಅಭಿವೃದ್ಧಿಗೆ ಗಮನಾರ್ಹ ಕೊಡುಗೆಗಳನ್ನು ನೀಡಿದ ಗಣ್ಯರು ಮತ್ತು ಸಂಸ್ಥೆಗಳನ್ನು ಗುರುತಿಸುತ್ತವೆ. ಪ್ರಧಾನಮಂತ್ರಿ ಯೋಗ ಪ್ರಶಸ್ತಿಗಳು ರೋಗ ತಡೆಗಟ್ಟುವಿಕೆ, ಆರೋಗ್ಯ ಸುಧಾರಣೆ ಮತ್ತು ಜೀವನಶೈಲಿ-ಸಂಬಂಧಿತ ಅಸ್ವಸ್ಥತೆಗಳ ನಿರ್ವಹಣೆಯಲ್ಲಿ ಯೋಗದ ಪಾತ್ರ ಹಾಗೂ ಈ ಕ್ಷೇತ್ರದ ಕೊಡುಗೆಗಳನ್ನು ಆಚರಿಸುವ ಗುರಿಯನ್ನು ಹೊಂದಿದೆ. ರಾಷ್ಟ್ರೀಯ ವ್ಯಕ್ತಿ, ರಾಷ್ಟ್ರೀಯ ಸಂಸ್ಥೆ, ಅಂತಾರಾಷ್ಟ್ರೀಯ ವ್ಯಕ್ತಿ ಮತ್ತು ಅಂತಾರಾಷ್ಟ್ರೀಯ ಸಂಸ್ಥೆ ವಿಭಾಗಗಳಲ್ಲಿ ಪ್ರಶಸ್ತಿಗಳನ್ನು ನೀಡಲಾಗುತ್ತದೆ. ಪ್ರತಿಯೊಬ್ಬ ವಿಜೇತರಿಗೆ ಟ್ರೋಫಿ, ಪ್ರಮಾಣಪತ್ರ ಮತ್ತು ೨೫ ಲಕ್ಷ ರೂಪಾಯಿಗಳ ನಗದು ಪ್ರಶಸ್ತಿಯನ್ನು ನೀಡಲಾಗುತ್ತದೆ. ಅರ್ಜಿ ಸಲ್ಲಿಸುವವರು ೪೦ ವರ್ಷ ಅಥವಾ ಅದಕ್ಕಿಂತ ಹೆಚ್ಚಿನ ವಯಸ್ಸಿನವರಾಗಿರಬೇಕು ಮತ್ತು ಯೋಗ ಪ್ರಚಾರದಲ್ಲಿ ಕನಿಷ್ಠ ೨೦ ವರ್ಷಗಳ ಕಾಲ ಸೇವೆ

ಸಲ್ಲಿಸಿರಬೇಕು. ನಾಮನಿರ್ದೇಶನಗಳನ್ನು ಸಲ್ಲಿಸಲು ಮುಂಬರುವ ಮಾರ್ಚ್ ೩೧ ಕೊನೆಯ ದಿನವಾಗಿದ್ದು, ಮೈಗೌವ್ ವೇದಿಕೆಯ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

<><><><>

ಉತ್ತರಪ್ರದೇಶದ ಪ್ರಯಾಗ್‌ರಾಜ್‌ನ ಮಹಾಕುಂಭ ಮೇಳದಲ್ಲಿ ೪೦ ಸಾವಿರ ಚದರ ಅಡಿ ವಿಸ್ತೀರ್ಣದಲ್ಲಿ ಹರಡಿರುವ, ಸ್ವಚ್ಛ ಸುಜಲ್ ಗ್ರಾಮ, ವಿವಿಧ ಸರ್ಕಾರಿ ಉಪಕ್ರಮಗಳ ಅಡಿಯಲ್ಲಿ ಉತ್ತರ ಪ್ರದೇಶದ ಗ್ರಾಮೀಣ ಪ್ರದೇಶದ ಅಭಿವೃದ್ಧಿಯ ಪ್ರತೀಕವಾಗಿದೆ.

ಈ ಕುರಿತು ಒಂದು ವರದಿ : ಅಭಯ್ (೬೦ ಸೆಕೆಂಡ್ಸ್)

ಪ್ರಯಾಗ್ ರಾಜ್ ಕುಂಭಮೇಳಕ್ಕೆ ಭೇಟಿ ನೀಡುವ ಯಾತಾರ್ಥಿಗಳಿಗೆ, ಸ್ವಚ್ಛ ಸುಜಲ್ ಗ್ರಾಮ, ರಾಜ್ಯದ ಯಶಸ್ಸಿನ ಒಂದು ನೋಟವನ್ನು ನೀಡುತ್ತದೆ, ರಾಜ್ಯ ಸರ್ಕಾರದ ಪ್ರಮುಖ ಸುಧಾರಣೆಗಳಿಂದ ರೂಪಾಂತರಗೊಂಡ ಹಳ್ಳಿಗಳಿಗೆ ಇದು ಪ್ರತೀಕವಾಗಿದೆ. ಈ ಮಾದರಿ ಗ್ರಾಮ, ಬಂಡಾ, ಝೂನ್ಸಿ, ಚಿತ್ರಕೂಟ, ಲಲಿತಪುರ ಮತ್ತು ಮಹೋಬಾ ಸೇರಿದಂತೆ, ಬುಂದೇಲ್‌ಖಂಡ್‌ನಲ್ಲಿ ನೀರಿನ ಕೊರತೆಯ ಸಮಸ್ಯೆಗಳನ್ನು ಹೇಗೆ ಪರಿಹರಿಸಲಾಗಿದೆ ಎಂಬುದನ್ನು ಪ್ರದರ್ಶಿಸುತ್ತದೆ. ಕುಡಿಯುವ ನೀರಿನ ಸಮಸ್ಯೆಗೆ ಪರಿಹಾರ- ನನ್ನ ಗ್ರಾಮದ ಹೊಸ ಪರಿಚಯ' ಎಂಬ ವಿಷಯದ ಆಧಾರದಲ್ಲಿ ನಿರ್ಮಿಸಲ್ಪಟ್ಟಿರುವ ಈ ಗ್ರಾಮ, 'ಅತಿಥಿ ದೇವೋ ಭವ' ಎಂಬ ಹಳೆಯ ಸಂಪ್ರದಾಯವನ್ನು ಪ್ರತಿಬಿಂಬಿಸುತ್ತದೆ. ಇಲ್ಲಿಗೆ ಭೇಟಿ ನೀಡುವವರಿಗೆ, 'ಜಲ ಪ್ರಸಾದ್' ಹೆಸರಿನಲ್ಲಿ ನೀರನ್ನು ನೀಡಲಾಗುತ್ತದೆ. ಪ್ರತಿದಿನ ಸಂಜೆ ಈ ಗ್ರಾಮದಲ್ಲಿ ವಿವಿಧ ಕಾರ್ಯಕ್ರಮಗಳು, ಪ್ರದರ್ಶನಗಳೊಂದಿಗೆ ಗಂಗಾ ಆರತಿಯನ್ನು ನಡೆಸಲಾಗುತ್ತಿದೆ. ಗ್ರಾಮದಲ್ಲಿ ಎಲ್ಲಾ ಮಾಹಿತಿ, ಹಿಂದಿ, ಇಂಗ್ಲಿಷ್, ಬಂಗಾಳಿ, ತೆಲುಗು ಮತ್ತು ಮರಾಠಿ- ಐದು ಭಾಷೆಗಳಲ್ಲಿ ಲಭ್ಯವಿದೆ ಹಾಗಾಗಿ, ದೇಶಾದ್ಯಂತದ ಪ್ರವಾಸಿಗರು ಉತ್ತರ ಪ್ರದೇಶದಲ್ಲಿ ನಡೆಯುತ್ತಿರುವ ಅಭಿವೃದ್ಧಿಯ ಕುರಿತು ತಿಳಿಯಲು ಸಾಧ್ಯವಾಗುತ್ತದೆ. ಸ್ವಚ್ಛ ಸುಜಲ್ ಗ್ರಾಮವನ್ನು ನಮಾಮಿ ಗಂಗೆ ಮತ್ತು ಗ್ರಾಮೀಣ ನೀರು ಸರಬರಾಜು ಇಲಾಖೆಗಳು ಅಭಿವೃದ್ಧಿಪಡಿಸಿವೆ. ಮಹಾ ಕುಂಭಮೇಳ ಇದೇ ೨೬ ಮಹಾಶಿವರಾತ್ರಿಯವರೆಗೂ ನಡೆಯಲಿದ್ದು,ದಾಖಲೆಯ ಸಂಖ್ಯೆಯ ಯಾತ್ರಾರ್ಥಿಗಳು ಈ ಗ್ರಾಮಕ್ಕೆ ಭೇಟಿ ನೀಡುತ್ತಿದ್ದಾರೆ.

<><><><>

ಭಾರತ ಮತ್ತು ಜಪಾನ್ ನಡುವಿನ ೭ನೇ ಆವೃತ್ತಿಯ ಜಂಟಿ ಮಿಲಿಟರಿ ಸಮರಾಭ್ಯಾಸವು ಇದೇ ೨೫ರಿಂದ ಮಾರ್ಚ್ ೯ರವರೆಗೆ ಜಪಾನ್‌ನ ಮೌಂಟ್ ಫುಜಿಯಲ್ಲಿ ನಡೆಯಲಿದೆ ಎಂದು ಭಾರತೀಯ ಸೇನೆ ತಿಳಿಸಿದೆ. ಈ ಸಮರಾಭ್ಯಾಸ ವಿಶ್ವಸಂಸ್ಥೆಯ ಆದೇಶಾನುಸಾರ, ಯುದ್ಧ ಮತ್ತು ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಯನ್ನು ಕೈಗೊಳ್ಳುವಾಗ ಉಭಯ ದೇಶಗಳ ಪಡೆಗಳ ನಡುವೆ ಪರಸ್ಪರ ಕಾರ್ಯಸಾಧ್ಯತೆಯನ್ನು ಹೆಚ್ಚಿಸುವ ಗುರಿ ಹೊಂದಿದೆ ಎಂದು ರಕ್ಷಣಾ ಸಚಿವಾಲಯ ಮಾಹಿತಿ ನೀಡಿದೆ.

<><><><>

ಪ್ರಧಾನಿ ನರೇಂದ್ರ ಮೋದಿ ಅವರ ಆಹ್ವಾನದ ಮೇರೆಗೆ ಕತಾರ್ ಅಮೀರ್ ಶೇಖ್ ತಮೀಮ್ ಬಿನ್ ಹಮದ್ ಅಲ್-ಥಾನಿ ಇಂದು ಭಾರತಕ್ಕೆ ಅಧಿಕೃತ ಭೇಟಿ ನೀಡಲಿದ್ದಾರೆ. ಅವರೊಂದಿಗೆ ಸಚಿವರು, ಹಿರಿಯ ಅಧಿಕಾರಿಗಳು ಮತ್ತು ವ್ಯಾಪಾರ ನಿಯೋಗ ಸೇರಿದಂತೆ ಉನ್ನತ ಮಟ್ಟದ ನಿಯೋಗ ಭಾರತಕ್ಕೆ ಭೇಟಿ ನೀಡಲಿದೆ. ಭಾರತಕ್ಕೆ ಕತಾರ್ ಅಮೀರ್ ಅವರ ಎರಡನೇ ಭೇಟಿ ಇದಾಗಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಅವರು ಈ ಹಿಂದೆ ಮಾರ್ಚ್ ೨೦೧೫ ರಲ್ಲಿ ಭಾರತಕ್ಕೆ ಭೇಟಿ ನೀಡಿದ್ದರು. ಶೇಖ್ ತಮೀಮ್ ಬಿನ್ ಹಮದ್ ಅಲ್-ಥಾನಿ ಅವರಿಗೆ ನಾಳೆ ರಾಷ್ಟ್ರಪತಿ ಭವನದ ಆವರಣದಲ್ಲಿ ಔಪಚಾರಿಕ ಸ್ವಾಗತ ನೀಡಲಾಗುವುದು. ಅಮೀರ್ ಅವರು ತಮ್ಮ ಭೇಟಿಯ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರೊಂದಿಗೆ ಚರ್ಚೆ ನಡೆಸಲಿದ್ದಾರೆ. ಈ ನಡುವೆ, ರಾಷ್ಟ್ರಪತಿಯವರು ಅಮೀರ್ ಅವರಿಗೆ ಗೌರವಾರ್ಥವಾಗಿ ಔತಣಕೂಟವನ್ನು ಸಹ ಆಯೋಜಿಸಲಿದ್ದಾರೆ. ಅಮೀರ್ ಅವರು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದ್ವಿಪಕ್ಷೀಯ ಸಂಬಂಧಗಳ ವಿವಿಧ ಅಂಶಗಳನ್ನು ಒಳಗೊಂಡ ವಿಸ್ತೃತ ಚರ್ಚೆ ನಡೆಸಲಿದ್ದಾರೆ. ಭಾರತ ಮತ್ತು ಕತಾರ್ ಸ್ನೇಹ, ವಿಶ್ವಾಸ ಮತ್ತು ಪರಸ್ಪರ ಗೌರವದ ಆಳವಾದ ಐತಿಹಾಸಿಕ ಸಂಬಂಧಗಳನ್ನು ಹೊಂದಿವೆ. ಇತ್ತೀಚಿನ ವರ್ಷಗಳಲ್ಲಿ, ವ್ಯಾಪಾರ, ಹೂಡಿಕೆ, ಇಂಧನ, ತಂತ್ರಜ್ಞಾನ, ಸಂಸ್ಕೃತಿ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿ ಎರಡೂ ದೇಶಗಳ ನಡುವಿನ ಸಂಬಂಧಗಳು ಬಲಗೊಳ್ಳುತ್ತಲೇ ಇವೆ. ಅಲ್ಲಿ ವಾಸಿಸುವ ಭಾರತೀಯ ಸಮುದಾಯ ಕತಾರ್‌ನ ಅತಿದೊಡ್ಡ ವಲಸಿಗ ಸಮುದಾಯವಾಗಿದೆ. ಕತಾರ್ ಅಮೀರ್ ಅವರ ಭಾರತ ಭೇಟಿಯು ಬೆಳೆಯುತ್ತಿರುವ ಬಹುಮುಖ ಪಾಲುದಾರಿಕೆಗೆ ಮತ್ತಷ್ಟು ವೇಗ ನೀಡಲಿದೆ ಎಂದು ಹೇಳಲಾಗಿದೆ.

<><><><>

ಪ್ರಸಕ್ತ  ಸಾಲಿನ ಇಂಡಿಯನ್ ಪ್ರೀಮಿಯರ್ ಲೀಗ್- ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿ ಮಾರ್ಚ್ ೨೨ ರಂದು ಆರಂಭವಾಗಲಿದೆ ಎಂದು ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ-ಬಿಸಿಸಿಐ ಪ್ರಕಟಿಸಿದೆ. ಇದು ಐಪಿಎಲ್‌ನ ೧೮ನೇ ಆವೃತ್ತಿಯಾಗಿದೆ. ಆರಂಭಿಕ ಪಂದ್ಯ ಕೋಲ್ಕತ್ತಾದ ಈಡನ್ ಗಾರ್ಡನ್ಸ್ ಕ್ರೀಡಾಂಗಣದಲ್ಲಿ ನಡೆಯಲಿದ್ದು, ಹಾಲಿ ಚಾಂಪಿಯನ್ಸ್ ಕೋಲ್ಕತ್ತಾ ನೈಟ್ ರೈಡರ್ಸ್, ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಗಳು ಮುಖಾಮುಖಿಯಾಗಲಿವೆ. ಮಾರ್ಚ್ ೨೩ ರಂದು ಹೈದರಾಬಾದ್‌ನ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ಮತ್ತು ರಾಜಸ್ಥಾನ ರಾಯಲ್ಸ್ ಸೆಣಸಲಿವೆ. ಈ ವರ್ಷದ ಐಪಿಎಲ್ ಟೂರ್ನಿಯಲ್ಲಿ ೧೦ ತಂಡಗಳು ಪ್ರಶಸ್ತಿಗಾಗಿ ಸ್ಪರ್ಧಿಸಲಿದ್ದು, ಐದು ತಂಡಗಳ ಎರಡು ಗುಂಪುಗಳಾಗಿ ವಿಂಗಡಿಸಲಾಗಿದೆ. ಎ-ಗುಂಪಿನಲ್ಲಿರುವ ತಂಡಗಳೆಂದರೆ: ಚೆನ್ನೈ ಸೂಪರ್ ಕಿಂಗ್ಸ್, ರಾಯಲ್ ಚಾಲೆಂಜರ್ಸ್ ಬೆಂಗಳೂರು, ರಾಜಸ್ಥಾನ ರಾಯಲ್ಸ್, ಪಂಜಾಬ್ ಕಿಂಗ್ಸ್ ಹಾಗೂ ಕೋಲ್ಕತ್ತಾ ನೈಟ್ ರೈಡರ್ಸ್. ಬಿ-ಗುಂಪಿನಲ್ಲಿರುವ ತಂಡಗಳು: ಮುಂಬೈ ಇಂಡಿಯನ್ಸ್, ಗುಜರಾತ್ ಟೈಟಾನ್ಸ್, ದೆಹಲಿ ಕ್ಯಾಪಿಟಲ್ಸ್, ಸನ್‌ರೈಸರ್ಸ್ ಹೈದರಾಬಾದ್, ಲಕ್ನೋ ಸೂಪರ್ ಜೈಂಟ್ಸ್. ಒಟ್ಟು ೬೫ ದಿನಗಳ ಕಾಲ ೧೩ ಸ್ಥಳಗಳಲ್ಲಿ ೭೪ ಐಪಿಎಲ್ ಪಂದ್ಯಗಳು ನಡೆಯಲಿವೆ ಎಂದು ಬಿಸಿಸಿಐ ತಿಳಿಸಿದೆ.

<><><><>

ವಡೋದರಾದ ಕೋಟಂಬಿ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಮಹಿಳಾ ಪ್ರೀಮಿಯರ್ ಲೀಗ್ ಪಂದ್ಯಾವಳಿಯಲ್ಲಿ, ಗುಜರಾತ್ ಜೈಂಟ್ಸ್ ತಂಡ, ಯುಪಿ ವಾರಿಯರ್ಸ್ ತಂಡವನ್ನು ೬ ವಿಕೆಟ್‌ಗಳಿಂದ ಸೋಲಿಸಿದೆ. ೧೪೪ ರನ್‌ಗಳ ಗೆಲುವಿನ ಗುರಿ ಬೆನ್ನಟ್ಟಿದ ಗುಜರಾತ್ ಜೈಂಟ್ಸ್ ,೧೮ ಓವರ್‌ಗಳಲ್ಲಿ ಆರು ವಿಕೆಟ್ ಬಾಕಿ ಉಳಿಸಿಕೊಂಡು, ಗುರಿ ತಲುಪಿತು. ನಾಯಕಿ ಆಶ್ಲೇ ಗಾರ್ಡ್ನರ್ ೫೨ ರನ್ ಗಳಿಸಿ, ಪಂದ್ಯ ಶ್ರೇಷ್ಠ ಆಟಗಾರ್ತಿ ಪ್ರಶಸ್ತಿಗೆ ಭಾಜನರಾದರು. ಡಿಯಾಂಡ್ರಾ ಡಾಟಿನ್ ಅಜೇಯ ೩೩ ಮತ್ತು ಹರ್ಲೀನ್ ಡಿಯೋಲ್ ಅಜೇಯ ೩೪ ರನ್ ಗಳಿಸಿ ತಂಡದ ಗೆಲುವಿಗೆ ಕಾರಣರಾದರು. ಇದಕ್ಕೂ ಮುನ್ನ, ಟಾಸ್ ಗೆದ್ದ ಗುಜರಾತ್ ಜೈಂಟ್ಸ್ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿತ್ತು. ಮೊದಲು ಬ್ಯಾಟ್ ಮಾಡಿದ ಯುಪಿ ವಾರಿಯರ್ಸ್ ನಿಗದಿತ ಇಪ್ಪತ್ತು ಓವರ್‌ಗಳಲ್ಲಿ ೯ ವಿಕೆಟ್‌ಗೆ ೧೪೩ ರನ್ ಗಳಿಸಿತು, ನಾಯಕಿ ದೀಪ್ತಿ ಶರ್ಮಾ ೩೯. ಉಮಾ ಚೆಟ್ರಿ ೨೪ ರನ್ ಗಳಿಸಿದರು. ಇಂದು ವಡೋದರಾದ ಕೋಟಂಬಿ ಕ್ರೀಡಾಂಗಣದಲ್ಲಿ ನಡೆಯಲಿರುವ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ತಂಡ, ರಾಯಲ್

ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಎದುರಿಸಲಿದೆ. ಪಂದ್ಯ ಸಂಜೆ ೦೭:೩೦ ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>